# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2367 (2747)

ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 28.03.2022

ಉತ್ತರಿಸುವವರು : ಅರಣ್ಯ ಹಾಗೂ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕು, ಕೊಂಡಜ್ಜಿ ಗ್ರಾಮದಲ್ಲಿ ಎಷ್ಟು ಎಕರೆ ಸರ್ಕಾರಿ ಜಮೀನುಗಳನ್ನು ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ (4)ರ ಅಡಿಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆಯೇ; | ದಾವಣಗೆರೆ ಜಿಲ್ಲೆ, ಹರಿಹರ ತಾಲ್ಲೂಕು, ಕೊಂಡಜ್ಜಿ ಗ್ರಾಮದ ವಿವಿಧ ಸರ್ವೆ ನಂಬರ್‌ಗಳಲ್ಲಿ ಒಟ್ಟು 1,279.20 ಎಕರೆ (517.81 ಹೆಕ್ಟೇರ್) ಪ್ರದೇಶವನ್ನು ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ-4ರಡಿ ಅಧಿಸೂಚನೆ ಹೊರಡಿಸಲಾಗಿದೆ. |
| ಆ) | ಕಲಂ (4)ರ ನಂತರ ಕಲಂ (17) ರಂತೆ ಅಧಿಸೂಚನೆ ಹೊರಡಿಸಲಾಗಿದೆಯೇ; | ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ-4ರಡಿ 41 ಪ್ರಕರಣಗಳಿಗೆ ಅಧಿಸೂಚನೆ ಹೊರಡಿಸಲಾಗಿದೆ. ಅವುಗಳ ಪೈಕಿ 2 ಪ್ರಕರಣಗಳಿಗೆ ಕಲಂ-17 ರಂತೆ ಅಧಿಸೂಚನೆ ಹೊರಡಿಸಲು ಶಿಫಾರಸ್ಸು ಮಾಡಲಾಗಿದ್ದು, ಅದು ಸಹ ಬಾಕಿಯಿರುತ್ತದೆ. |
| ಇ) | ಹೊರಡಿಸಿದ್ದಲ್ಲಿ, ಎಷ್ಟು ಎಕರೆ ಸರ್ಕಾರಿ ಜಮೀನಿಗೆ ಅಧಿಸೂಚನೆ ಹೊರಡಿಸಿದೆ; ಉಳಿದಿರುವ ಸರ್ಕಾರಿ ಜಮೀನುಗಳನ್ನು ಕಂದಾಯ ಇಲಾಖೆಯ ವಶಕ್ಕೆ ನೀಡಲಾಗಿದೆಯೇ; ಅಥವಾ ಇಲ್ಲವೇ? (ಸಕಾರಣದೊಂದಿಗೆ ಸಂಪೂರ್ಣ ವಿವರ ನೀಡುವುದು) | ಒಟ್ಟು 1,279.20 ಎಕರೆ (571.81 ಹೆಕ್ಟೇರ್) ಪ್ರದೇಶವನ್ನು ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ-4ರಡಿ ಅಧಿಸೂಚನೆ ಹೊರಡಿಸಲಾಗಿದೆ. ಉಳಿದಿರುವ ಸರ್ಕಾರಿ ಜಮೀನು ಕಂದಾಯ ಇಲಾಖೆಯ ವಶದಲ್ಲಿರುತ್ತದೆ. |

ಸಂಖ್ಯೆ: ಅಪಜೀ 50 ಎಫ್‌ಎಫ್ 2022

(ಉಮೇಶ್ ವಿ. ಕತ್ತಿ)
ಅರಣ್ಯ ಹಾಗೂ ಆಹಾರ, ನಾಗರೀಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು